**ಕರ್ನಾಟಕ ವಿಧಾನ ಪರಿಷತ್ತು**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 794(959)

ಸದಸ್ಯರ ಹೆಸರು : ಶ್ರೀ ಕೆ. ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 27/12/2022

ಉತ್ತರಿಸುವವರು : ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು.

| ಕ್ರ.ಸ | ಪ್ರಶ್ನೆ | ಉತ್ತರ |
|---|---|---|
| 1 | ರಾಜ್ಯಾದ್ಯಂತ ಪಟ್ಟಣ ಪಂಚಾಯತಿಗಳಲ್ಲಿ ವಿನ್ಯಾಸ ನಕ್ಷೆ ಮತ್ತು ಫಾರಂ 03 ನೀಡಲು ಇರುವ ಸಮಸ್ಯೆಗಳೇನು; ಇದರಿಂದಾಗಿ ರಾಜ್ಯದ ಸಾವಿರಾರು ಜನರು ಭೂ ಪರಿವರ್ತನೆಗೆ ಮತ್ತು ಕಟ್ಟಡ ನಿರ್ಮಾಣಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆದಂತಹ ಎಲ್ಲಾ ಅಧಿಕೃತ ಆಸ್ತಿಗಳಿಗೆ ನಮೂನೆ-3 (ಇ-ಖಾತಾ) ಹಾಗೂ ಕಟ್ಟಡ ಪರವಾನಿಗೆ ನೀಡಲಾಗುತ್ತದೆ.<br><br>ಭೂ ಪರಿವರ್ತಿಸಿದ/ ಭೂ ಪರಿವರ್ತಿಸದ ಜಮೀನುಗಳಿಗೆ ವಿನ್ಯಾಸ ಅನುಮೋದನೆ ಪಡೆಯದೇ ಅನಧಿಕೃತ ಬಡಾವಣೆಗಳನ್ನು ನಿರ್ಮಾಣ ಮಾಡಿ ಕಟ್ಟಡಗಳನ್ನು ಅಕ್ರಮವಾಗಿ ನಿರ್ಮಿಸುವುದರಿಂದ ನಗರ ಪ್ರದೇಶಗಳಲ್ಲಿ ಉದ್ಯಾನವನ/ಬಯಲು ಜಾಗೆಗಳ ಕೊರತೆ, ನಾಗರೀಕ ಸೌಲಭ್ಯಗಳನ್ನು ಕಲ್ಪಿಸುವಲ್ಲಿ ವಿಫಲತೆ, ವ್ಯವಸ್ಥಿತವಾದ ರಸ್ತೆಯ ಪರಿಚಲನೆ, ಮೂಲಭೂತ ಸೌಕರ್ಯದ ಕೊರತೆ ಹಾಗೂ ಯೋಜಿತ ಬೆಳವಣಿಗೆಗಳಲ್ಲಿ ತೊಡಕುಗಳಿರುವುದು ಕಂಡುಬರುತ್ತದೆ. ಇಂತಹ ಬೆಳವಣಿಗೆಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ವಿನ್ಯಾಸಗಳಿಗೆ ಸಕ್ಷಮ ಪ್ರಾಧಿಕಾರಗಳಿಂದ ಅನುಮೋದನೆ ಪಡೆಯದಿರುವ ನಿಯಮಬಾಹಿರ ನಿರ್ಮಾಣಗಳಿಗೆ ಕಟ್ಟಡ ಪರವಾನಿಗೆ ನೀಡಲಾಗುತ್ತಿಲ್ಲ.<br><br>ಕರ್ನಾಟಕ ಭೂ ಕಂದಾಯ ಅಧಿನಿಯಮ 1964ರ ಕಲಂ 95(2)ರಡಿ ಕೃಷಿ ಭೂಮಿಯನ್ನು ಕೃಷಿಯೇತರ ಉದ್ದೇಶಕ್ಕೆ ಬದಲಾಯಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>ಸರ್ಕಾರದ ಆದೇಶ ದಂಖ್ಯೆ: ಆರ್‌ಡಿ/156/ಎಲ್‌ಜಿಪಿ/2020(ಇ), ದಿನಾಂಕ:21.09.2020ರಂತೆ ಕೃಷಿ ಭೂಮಿಯನ್ನು ಕೃಷಿಯೇತರ ಉದ್ದೇಶಗಳಿಗಾಗಿ ಭೂ ಪರಿವರ್ತಿಸುವ ವಿಧಾನವನ್ನು ಸರಳೀಕರಣಗೊಳಿಸಿ ಅರ್ಜಿದಾರರು ಭೂ ಪರಿವರ್ತನೆಗೆ http://landrecords:karnataka.gov.in/citizenportalನಲ್ಲಿ ಲಾಗಿನ್ ಆಗುವ ಮೂಲಕ ಅಫಿಡವಿಟ್ ಆಧಾತರಿತ ಭೂ |

| | | |
|---|---|---|
| | | ಪರಿವರ್ತನಾ ಅರ್ಜಿಯನ್ನು ಈ ಕೆಳಕಂಡ ದಾಖಲೆಗಳೊಂದಿಗೆ ಜಿಲ್ಲಾಧಿಕಾರಿಗಳಿಗೆ ಸಲ್ಲಿಸಬಹುದಾಗಿರುತ್ತದೆ.<br><br>• ಚಾಲ್ತಿ ವರ್ಷದ ಪಹಣಿ ಪತ್ರಿಕೆ<br>• ಹಕ್ಕು ಬದಲಾವಣೆ ದಾಖಲಾತಿ (ಮ್ಯುಟೇಶನ್ ಪ್ರತಿ)<br>• ಭೂ ಪರಿವರ್ತನಾ ಪೂರ್ವ ನಕ್ಷೆ<br>• ನೋಟರಿಯವರಿಂದ ಪ್ರಮಾಣಿಕರಿಸಿದ ಮೂಲ ಅಫಿಡವಿಟ್ ಪ್ರತಿ |
| 2 | ಬಂದಿದಲ್ಲಿ ಈ ಕುರಿತಂತೆ ಸರ್ಕಾರ ಕೈಗೊಂಡ ಕ್ರಮಗಳೇನು? | ಸ್ಥಳೀಯ ಯೋಜನಾ ಪ್ರದೇಶ ಘೋಷಣೆಯಾಗಿ ಮಹಾಯೋಜನೆ ಅನುಮೋದನೆಯಾಗಿರುವ ಪ್ರದೇಶಗಳಲ್ಲಿ ದಿ: 19.10.2013ರ ಮುಂಚಿತವಾಗಿ ಬಂದಿರುವ ಎಲ್ಲಾ ತರಹದ ಅನಧಿಕೃತ ಅಭಿವೃದ್ಧಿಗಳನ್ನು ಸಕ್ರಮಗೊಳಿಸಲು ಸರ್ಕಾರವು ಅಧಿಸೂಚನೆ ಸಂಖ್ಯೆ: ನಅಇ 556 ಮೈಅಪ್ರಾ 2013(1) ದಿ:28.05.2014 ರಲ್ಲಿ Karnataka Town and Country Planning (Regularisation of unauthorized Development or Constructions) Rules, 2014 ಅನ್ನು ಜಾರಿಗೆ ತಂದಿರುತ್ತದೆ. ಸದರಿ ನಿಯಮಕ್ಕೆ ಮಾನ್ಯ ಸರ್ವೋಚ್ಚ ನ್ಯಾಯಾಲಯವು SLA(c) No(s).957/2017 ರಲ್ಲಿ ದಿ:13.07.2017 ರಂದು ಮಧ್ಯಂತರ ತಡೆಯಜ್ಞೆಯನ್ನು ಮುಂದಿನ ತೀರ್ಪಿನವರೆಗೂ ಮುಂದುವರೆಸುವಂತೆ ಆದೇಶ ನೀಡಿರುತ್ತದೆ. ಈ ಕುರಿತು ಅಂತಿಮ ತೀರ್ಪು ಬಂದ ನಂತರ ನಿಯಮಾನುಸಾರ ಕ್ರಮವಹಿಸಲಾಗುವುದು. |

ಸಂಖ್ಯೆ: ನಅಇ 338 ಜಿಇಎಲ್ 2022(ಇ)

ಎನ್. ನಾಗರಾಜು (ಎಂ.ಟಿ.ಬಿ)
ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ
ಸಾರ್ವಜನಿಕ ವಲಯ ಉದ್ಯಮಗಳ ಸಚಿವರು